**ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತ**

**ದೇವರಾಜ ಅರಸು ಭವನ, 4ನೇ ಮಹಡಿ, ನಂ 16ಡಿ, ಮಿಲ್ಲರ್ ಟ್ಯಾಂಕ್ ಬೆಡ್ ಏರಿಯಾ, ವಸಂತನಗರ, ಬೆಂಗಳೂರು- 52**

ಸಂಖ್ಯೆ: ದೇಹಿನಿ/ಪಸ್ತು/ಸಿಆರ್-2ಎ/2018-19 ದಿನಾಂಕ: 03/10/2018

# ಪ್ರಕಟಣೆ

ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ 2018-19ನೇ ಸಾಲಿಗೆ ಹಿಂದುಳಿದ ವರ್ಗಗಳ ನಿರುದ್ಯೋಗಿ ಪದವಿಧರರಿಗೆ ಸ್ವಯಂ ಉದ್ಯೋಗ ಸಾಲ ಸೌಲಭ್ಯವನ್ನು ವಾರ್ಷಿಕ ಶೇ.6ರ ಬಡ್ಡಿದರದಲ್ಲಿ ಗರಿಷ್ಠ ರೂ.10.00ಲಕ್ಷಗಳ ವರೆಗೆ ಸಾಲ ಒದಗಿಸಲಾಗುತ್ತಿದೆ. ಈ ಯೋಜನೆಯಲ್ಲಿ ಸೌಲಭ್ಯ ಪಡೆಯಲು ಬಯಸುವವರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. **ನಿಗದಿತ ಅರ್ಜಿ ನಮೂನೆಗಳನ್ನು ನಿಗಮದ ಜಿಲ್ಲಾ ವ್ಯವಸ್ಥಾಪಕರ ಕಛೇರಿಯಲ್ಲಿ ಅಥವಾ ಆಯಾ ತಾಲ್ಲೂಕಿನ ಹಿಂದುಳಿದ ವರ್ಗಗಳ ಕಲ್ಯಾಣ ವಿಸ್ತರಣಾಧಿಕಾರಿಗಳ ಕಛೇರಿಯಲ್ಲಿ ಅರ್ಜಿ ಪಡೆದು ಭರ್ತಿ ಮಾಡಿದ ಅರ್ಜಿಗಳನ್ನು ಅಗತ್ಯ ದಾಖಲಾತಿಗಳೊಂದಿಗೆ ಸಲ್ಲಿಸಲು ಕೊನೆಯ ದಿನಾಂಕ:20/10/2018.**

**ಒಂದು ಬಾರಿ ನಿಗಮದ ಯಾವುದಾದರು ಯೋಜನೆಯಲ್ಲಿ ಪ್ರಯೋಜನ ಪಡೆದಿದ್ದಲ್ಲಿ ಅಂತಹವರು ಹಾಗೂ ಅವರ ಕುಟುಂಬದವರು ಮತ್ತೊಮ್ಮೆ ಸೌಲಭ್ಯ ಕೋರಿ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ. ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.**

**ಮೇಲ್ಕಂಡ ಯೋಜನೆಗಳಲ್ಲಿ ಸೌಲಭ್ಯ ಪಡೆಯಲು ಹೊಂದಿರಬೇಕಾದ ಸಾಮಾನ್ಯ ಅರ್ಹತೆಗಳು.**(1) ಅರ್ಜಿದಾರರು ಹಿಂದುಳಿದ ವರ್ಗಗಳ ಪ್ರವರ್ಗ-1, 2ಎ, 3ಎ ಮತ್ತು 3ಬಿಗೆ ಸೇರಿದವರಾಗಿರಬೇಕು.(ವಿಶ್ವಕರ್ಮ ಅದರ ಉಪ ಸಮುದಾಯಗಳನ್ನು ಮತ್ತು ಮತೀಯ ಅಲ್ಪಸಂಖ್ಯಾತರನ್ನು ಹೊರತುಪಡಿಸಿ) (2) ಅರ್ಜಿದಾರರ ಕುಟುಂಬದ ವಾರ್ಷಿಕ ವರಮಾನ ಗ್ರಾಮಾಂತರ ಪ್ರದೇಶದವರಿಗೆ ರೂ.40,000/-ಗಳು ಪಟ್ಟಣ ಪ್ರದೇಶದವರಿಗೆ ರೂ.55,000/-ಗಳ ಒಳಗಿರಬೇಕು, (3)ಅರ್ಜಿದಾರರು ಅಂಗೀಕೃತ ವಿಶ್ವವಿದ್ಯಾಲಯದಲ್ಲಿ ಪದವಿಧರರಾಗಿದ್ದು, ನಿರುದ್ಯೋಗಿಗಳಾಗಿರಬೇಕು, (4)ಅರ್ಜಿದಾರರು ಆಧಾರ್ ಸಂಖ್ಯೆ ಹೊಂದಿರಬೇಕು. (5)ಅರ್ಜಿದಾರರ ಐ.ಎಫ್.ಸಿ. ಕೋಡ್ ಹೊಂದಿರುವ ರಾಷ್ಟ್ರೀಕೃತ/ಗ್ರಾಮೀಣ ಬ್ಯಾಂಕ್ ಖಾತೆಗಳನ್ನು ಹೊಂದಿರಬೇಕು. (6) ಅರ್ಜಿದಾರರ ವಯಸ್ಸು ಕನಿಷ್ಠ 25 ರಿಂದ ಗರಿಷ್ಠ 40 ವರ್ಷಗಳ ಮಿತಿಯಲ್ಲಿರಬೇಕು.

ಮೇಲ್ಕಂಡ ಸೌಲಭ್ಯವನ್ನು ಪಡೆಯಲು ಇಚ್ಛಿಸುವ ಹಿಂದುಳಿದ ವರ್ಗದ ಅರ್ಜಿದಾರರು, ಅವರು ವಾಸಿಸುತ್ತಿರುವ ಆಯಾ ಜಿಲ್ಲೆಯ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರ ಕಛೇರಿ ಅಥವಾ ಆಯಾ ತಾಲ್ಲೂಕಿನ ಹಿಂದುಳಿದ ವರ್ಗಗಳ ವಿಸ್ತರಣಾಧಿಕಾರಿಗಳ ಕಛೇರಿಯಲ್ಲಿ ಸಾಲ ಯೋಜನೆಯ ಅರ್ಜಿ ನಮೂನೆಗಳನ್ನು ಪಡೆಯುವುದು. ನಿಗಮದ ವೆಬ್‌ಸೈಟ್ www.karnataka.gov.in/dbcdc ಇಲ್ಲಿಯೂ ಪಡೆಯಬಹುದಾಗಿರುತ್ತದೆ. ***ಭರ್ತಿ ಮಾಡಿದ ಅರ್ಜಿಗಳನ್ನು ಅಗತ್ಯ /ದಾಖಲಾತಿಗಳೊಂದಿಗೆ ದಿನಾಂಕ:20/10/2018 ರೊಳಗೆ ಸಲ್ಲಿಸುವುದು.*** ದಿ:20/10/2018ರ ನಂತರ ಬರುವ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ನಿಗಮದ ವೆಬ್‌ಸೈಟ್:www.karnataka.gov.in/dbcdc ಸಂಪರ್ಕಿಸಬಹುದಾಗಿದೆ.

**(ಕೆ.ರೇವಣಪ್ಪ)**
**ವ್ಯವಸ್ಥಾಪಕ ನಿರ್ದೇಶಕರು.**

**ದಿನಾಂಕ:03/10/2018**

**ಪ್ರತಿಯನ್ನು:**

1. ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಹಾಗೂ ಅಧ್ಯಕ್ಷರು ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಇವರ ಆಪ್ತ ಕಾರ್ಯದರ್ಶಿಗಳವರಿಗೆ ಮಾಹಿತಿಗಾಗಿ
2. ಎಲ್ಲಾ ಜಿಲ್ಲೆಯ ಮಾನ್ಯ ಜಿಲ್ಲಾಧಿಕಾರಿಗಳವರಿಗೆ ಮಾಹಿತಿಗಾಗಿ.
3. ಎಲ್ಲಾ ಜಿಲ್ಲೆಯ ಮಾನ್ಯ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳವರಿಗೆ ಮಾಹಿತಿಗಾಗಿ.
4. ಅಧ್ಯಕ್ಷರು ಕರ್ನಾಟಕ ರಾಜ್ಯ ಹಿಂದುಳಿದ ಜಾತಿಗಳ ಒಕ್ಕೂಟ(ರಿ) ಶೇಷಾದ್ರಿಪುರಂ ಬೆಂಗಳೂರು-20 ಇವರಿಗೆ ಮಾಹಿತಿಗಾಗಿ.
5. ಎಲ್ಲಾ ಸಹಾಯಕ ಪ್ರಧಾನ ವ್ಯವಸ್ಥಾಪಕರು/ವಿಭಾಗೀಯ ವ್ಯವಸ್ಥಾಪಕರು, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಇವರಿಗೆ ಮಾಹಿತಿಗೆ ಹಾಗೂ ಸೂಕ್ತ ಕ್ರಮಕ್ಕಾಗಿ.
6. ಎಲ್ಲಾ ಜಿಲ್ಲಾ ವ್ಯವಸ್ಥಾಪಕರು, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಇವರಿಗೆ ಮಾಹಿತಿಗೆ ಹಾಗೂ ಸ್ಥಳೀಯ ಪತ್ರಿಕೆಗಳಲ್ಲಿ ಉಚಿತವಾಗಿ ಸುದ್ದಿರೂಪದಲ್ಲಿ ಪ್ರಕಟಿಸಲು ಕ್ರಮ ವಹಿಸುವಂತೆ ತಿಳಿಸಿದೆ.
7. ನಿಗಮದ ಕೇಂದ್ರ ಕಛೇರಿ ಎಲ್ಲಾ ಅಧಿಕಾರಿ/ಸಿಬ್ಬಂದಿಯವರಿಗೆ ಮಾಹಿತಿಗಾಗಿ.
8. ಕಂಪ್ಯೂಟರ್ ಪ್ರೋಗ್ರಾಮರ್, ಕೇಂದ್ರ ಕಛೇರಿ ಇವರಿಗೆ ಮಾಹಿತಿಗಾಗಿ ಹಾಗೂ ನಿಗಮದ ವೆಬ್ ಸೈಟ್‌ನಲ್ಲಿ ಅಪ್‌ಲೋಡ್ ಮಾಡುವ ಸಲುವಾಗಿ.
9. ನಿಗಮದ ಸೂಚನಾ ಫಲಕಕ್ಕೆ